# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 2090 |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ, (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 25-03-2026 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ | ತುಮಕೂರು–ನೆಲಮಂಗಲ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯು ಕುಂಠಿತವಾಗಿದ್ದು, ನಿರಂತರ ಟ್ರಾಫಿಕ್ ಸಮಸ್ಯೆ ಹಾಗೂ ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು, ತುಮಕೂರು–ನೆಲಮಂಗಲ ರಾಷ್ಟ್ರೀಯ ಹೆದ್ದಾರಿ–48ರ ಕಿ.ಮೀ.29.435 ರಿಂದ ಕಿ.ಮೀ.74.168 ರವರೆಗೆ ಒಟ್ಟು 44.73 ಕಿ.ಮೀ. ಉದ್ದಕ್ಕೆ ಆರು ಪಥದ ಪ್ರವೇಶ ನಿಯಂತ್ರಿತ ಕಾಮಗಾರಿಯನ್ನು ಎರಡು ಹಂತಗಳಲ್ಲಿ ಭಾರತ್ ಮಾಲಾ ಪರಿಯೋಜನಾ ಅಡಿಯಲ್ಲಿ ಕೈಗೆತ್ತಿಕೊಂಡಿದ್ದು, ವಿವರ ಕೆಳಕಂಡಂತಿದೆ:<br><br>1) ಹಂತ–1 ರಲ್ಲಿ ಮುಖ್ಯ ರಸ್ತೆಯ ಎರಡೂ ಬದಿಗಳಲ್ಲಿ ಒಟ್ಟಾರೆಯಾಗಿ 56.70 ಕಿ.ಮೀ. ಉದ್ದದ ಸರ್ವಿಸ್ ರಸ್ತೆ ನಿರ್ಮಾಣ ಮತ್ತು ಹಾಲಿ ಇರುವ 12.64 ಕಿ.ಮೀ. ಉದ್ದದ ಆರು ಪಥದ ಮುಖ್ಯ ರಸ್ತೆಯಲ್ಲಿ ಮೇಲ್ಪದರ ಅಳವಡಿಕೆ ಒಳಗೊಂಡಿದ್ದು, ಕಾಮಗಾರಿಯನ್ನು ದಿನಾಂಕ: 25.08.2022 ರಂದು ಪ್ರಾರಂಭಿಸಲಾಗಿದೆ. ಯೋಜನೆಯ ಆರಂಭದಲ್ಲಿ ಸರ್ವಿಸ್ ರಸ್ತೆ ನಿರ್ಮಾಣಕ್ಕೆ ಅಡಚಣೆ ಮುಕ್ತ ಭೂಮಿಯನ್ನು ಅರಣ್ಯ ಇಲಾಖೆಯಿಂದ ಪಡೆಯುವಲ್ಲಿ, ರೈಲ್ವೆಯಿಂದ GAD ಅನುಮೋದನೆ, ROW ನಲ್ಲಿ ವ್ಯತ್ಯಾಸಗಳ ಕಾರಣಗಳಿಂದ ವಿಳಂಬಗೊಂಡಿದ್ದು, ಕಾಮಗಾರಿ ಆರಂಭವಾದ 1.5 ವರ್ಷಗಳಲ್ಲಿ ಸುಮಾರು 30 ಸ್ಥಳಗಳಲ್ಲಿನ ಅಡೆತಡೆಗಳಿಂದ 16.10 ಕಿ.ಮೀ ಉದ್ದದ ರಸ್ತೆಯಲ್ಲಿ ಕಾಮಗಾರಿಯನ್ನು ನಿರ್ವಹಿಸಲು ವಿಳಂಬವಾಗಿರುತ್ತದೆ. ಪ್ರಸ್ತುತ ಎರಡೂ ಬದಿಗಳಲ್ಲಿ ಒಟ್ಟಾರೆಯಾಗಿ 33.00 ಕಿ.ಮೀ. ಉದ್ದದ ಸರ್ವಿಸ್ ರಸ್ತೆಯನ್ನು ಪೂರ್ಣಗೊಳಿಸಲಾಗಿದ್ದು, ಬಾಕಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.<br>2) ಹಂತ–2 ರಲ್ಲಿ ಕಿ.ಮೀ.29.43 ರಿಂದ 61.52 ವರೆಗೂ ಹಾಲಿ ಇರುವ ನಾಲ್ಕು ಪಥದ ರಸ್ತೆಯನ್ನು ಆರು ಪಥಕ್ಕೆ ಅಗಲೀಕರಣ ಮಾಡಲು ಉದ್ದೇಶಿಸಿದ್ದು, ದಿನಾಂಕ: 17.12.2024 ರಲ್ಲಿ ಕಾಮಗಾರಿಯನ್ನು ಪ್ರಾರಂಭಿಸಿದ್ದು, ಪ್ರಸ್ತುತ 44.73 ಕಿ.ಮೀ. ಒಟ್ಟಾರೆ ಉದ್ದದ ಮುಖ್ಯ ರಸ್ತೆಯಲ್ಲಿ 17.06 ಕಿ.ಮೀ. ಉದ್ದದ ರಸ್ತೆಯನ್ನು ಪೂರ್ಣಗೊಳಿಸಲಾಗಿದ್ದು, ಬಾಕಿ ಕಾಮಗಾರಿಯು |

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| | | ಪ್ರಗತಿಯಲ್ಲಿರುತ್ತದೆ.<br><br>ಸದರಿ ಕಾಮಗಾರಿಯು ಸರ್ವೀಸ್ ರಸ್ತೆಯ ನಿರ್ಮಾಣದಲ್ಲಿ ಉಂಟಾದ ಅಡೆತಡೆಗಳಿಂದ ವಿಳಂಬವಾಗಿದ್ದು, ನಿರಂತರ ಸಮನ್ವಯ ಸಭೆಗಳಿಂದ ಭೂಸ್ವಾಧೀನ ಸಮಸ್ಯೆಯನ್ನು ಪರಿಹರಿಸಲಾಗಿದ್ದು, ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿದ್ದು, ಗುತ್ತಿಗೆದಾರರು ಹಂತ-1 & 2 ರ ಕಾಮಗಾರಿಗಳನ್ನು ಏಕಕಾಲದಲ್ಲಿ ನಿರ್ವಹಿಸುತ್ತಿದ್ದು, ಕಾಮಗಾರಿಯನ್ನು ದಿನಾಂಕ: 31.03.2027 ರಂದು ಪೂರ್ಣಗೊಳಿಸಲು ಉದ್ದೇಶಿಸಲಾಗಿರುತ್ತದೆ.<br><br>ಮುಖ್ಯ ಹೆದ್ದಾರಿ ರಸ್ತೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಅವಶ್ಯವಿರುವ ಸ್ಥಳಗಳಲ್ಲಿ ಸಂಚಾರ ಮಾರ್ಗವನ್ನು ಬದಲಾವಣೆ ಮಾಡಲಾಗಿದ್ದು, ಗರಿಷ್ಠ ಸಂಚಾರದ ಸಮಯದಲ್ಲಿ ಹೆಚ್ಚಿನ ವಾಹನಗಳ ಪ್ರಮಾಣದಿಂದ ಸಂಚಾರ ದಟ್ಟಣೆ ಕಂಡುಬರುತ್ತಿದ್ದು, ಸ್ಥಳೀಯರು ವಿರುದ್ಧ ದಿಕ್ಕಿನಲ್ಲಿ ವಾಹನ ಚಲಾಯಿಸುತ್ತಿರುವುದರಿಂದ ಹಾಗೂ ಜಂಕ್ಷನ್‌ನಲ್ಲಿ ವಾಹನಗಳು ರಸ್ತೆ ಕ್ರಾಸ್ ಮಾಡುವ ಸಂದರ್ಭಗಳಲ್ಲಿ ಸುಗಮ ಸಂಚಾರಕ್ಕೆ ಅಡಚಣೆಯಾಗಿರುವುದನ್ನು ಗಮನಿಸಲಾಗಿರುತ್ತದೆ. ಇದನ್ನು ಗುತ್ತಿಗೆದಾರರು, ಪೋಲಿಸರ ಸಹಕಾರದೊಂದಿಗೆ ಸಂಚಾರ ದಟ್ಟಣೆಯನ್ನು ನಿವಾರಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಕಾಮಗಾರಿಯನ್ನು ನಿರ್ವಹಿಸುತ್ತಿದ್ದಾರೆ.<br><br>ಮುಂದುವರೆದು, ಸದರಿ ರಸ್ತೆಯು ಪ್ರವೇಶ ನಿಯಂತ್ರಿತ ಹೆದ್ದಾರಿಯಾಗಿರುವುದರಿಂದ ಪ್ರಯಾಣಿಕರಿಗೆ ಹೆಚ್ಚಿನ ಸುರಕ್ಷತೆಯನ್ನು ಒದಗಿಸಲಾಗುತ್ತದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರವರು ವರದಿಸಿರುತ್ತಾರೆ. |
| ಆ | ಬಂದಿದ್ದಲ್ಲಿ, ತುಮಕೂರು-ನೆಲಮಂಗಲ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? | ಕಾಮಗಾರಿಯು ಪೂರ್ಣಗೊಳ್ಳುವ ಸಂಭವನೀಯ ದಿನಾಂಕ: 31.03.2027 ಆಗಿರುತ್ತದೆ. |

ಸಂಖ್ಯೆ: ಲೋಇ 201 ಸಿಎನ್‌ಹೆಚ್ 2026 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು